ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | :1060 (1106) |
| ಮಾನ್ಯ ಸದಸ್ಯರ ಹೆಸರು | :ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | :17.3.2025 |
| ಉತ್ತರಿಸುವ ಸಚಿವರು | :ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

*****

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯಾದ್ಯಾಂತ ಪಂಚಾಯಿತಿ ವ್ಯಾಪ್ತಿಯಲ್ಲಿ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕೆಲಸ ಮಾಡುವ ವೈದ್ಯರು ಮತ್ತು ಸಿಬ್ಬಂದಿಗಳಿಗೆ ಹತ್ತಿರದಲ್ಲಿ ವಸತಿ ಗೃಹಗಳು ಇಲ್ಲದೆ ಇರುವುದರಿಂದ ಮತ್ತು ಕೆಲವು ಕಡೆ ವಸತಿ ಗೃಹಗಳು ಇದ್ದರೂ ವೈದ್ಯರು ಮತ್ತು ಸಿಬ್ಬಂದಿಗಳು ಅಲ್ಲಿ ತಂಗದೆ ಇರುವುದರಿಂದ ಅನೇಕ ಗ್ರಾಮೀಣ ಭಾಗದ ಜನರು ರಾತ್ರಿ ಸಮಯದಲ್ಲಿ ಉಂಟಾಗುವ ತುರ್ತು ಚಿಕಿತ್ಸೆಗಾಗಿ ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೆಗೆದು ಕೊಂಡ ಕ್ರಮಗಳೇನು: | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಎಲ್ಲಾ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಹಾಗೂ ತುರ್ತು ಸೇವೆಗಳನ್ನು ಸಕಾಲದಲ್ಲಿ ಒದಗಿಸುವ ಸಲುವಾಗಿ ವೈದ್ಯರು ಹಾಗೂ ಸಿಬ್ಬಂದಿಗಳಿಗೆ ವಸತಿ ಗೃಹಗಳನ್ನು ನಿರ್ಮಾಣ ಮಾಡಲಾಗಿರುತ್ತದೆ. ಅಧಿಕೃತ ವಸತಿಗೃಹ ಲಭ್ಯವಿಲ್ಲದ ಕಡೆ ವೈದ್ಯರು ಮತ್ತು ಸಿಬ್ಬಂದಿಗಳು ನಿಯಮಾನುಸಾರ HRA ನೀಡಲಾಗುತ್ತದೆ.<br><br>ಸಾರ್ವಜನಿಕ ಆರೋಗ್ಯಕ್ಕೆ ಸಂಬಂಧಿಸಿದಂತೆ, ತುರ್ತು ಸೇವೆಗಳನ್ನು ಸಕಾಲದಲ್ಲಿ ಒದಗಿಸುವ ಸಲುವಾಗಿ ವೈದ್ಯರು ಹಾಗೂ ಸಿಬ್ಬಂದಿಗಳಿಗೆ ವಸತಿ ಗೃಹಗಳಲ್ಲಿ ವಾಸ್ತವ್ಯ ಮಾಡಲು ಕಡ್ಡಾಯಗೊಳಿಸಿ ಕಾಲ ಕಾಲಕ್ಕೆ ಸುತ್ತೋಲೆಗಳನ್ನು ಹೊರಡಿಸಲಾಗಿದೆ.<br><br>ಮುಂದುವರೆದು ಆಯುಕ್ತರು, ಆಕುಕ ಸೇವೆಗಳು ಇವರಿಂದ ಸುತ್ತೋಲೆ ಸಂಖ್ಯೆ:ಜಿ.ಆರ್.ಓ(1ಎ)/18/2023-24, ದಿ:22.09.2023 ಹಾಗೂ 02.01.2025 ರಲ್ಲಿ ಕಡ್ಡಾಯವಾಗಿ ವಸತಿಗೃಹ ಹಾಗೂ ಕೇಂದ್ರ ಸ್ಥಾನದಲ್ಲಿ ವಾಸ್ತವ್ಯ ಹೂಡಲು ಮತ್ತೊಮ್ಮೆ ಸೂಚನೆಗಳನ್ನು ನೀಡಲಾಗಿದೆ. ದಿ: 22.09.2023 ರ ಸುತ್ತೋಲೆಯನ್ನು **ಅನುಬಂಧ**ದಲ್ಲಿ ನೀಡಲಾಗಿದೆ. |
| ಆ. | ವೈದ್ಯರು ಮತ್ತು ಸಿಬ್ಬಂದಿಗಳು ಪಂಚಾಯಿತಿ ವ್ಯಾಪ್ತಿಯ ಪ್ರಾಥಮಿಕ ಚಿಕಿತ್ಸಾ ಕೇಂದ್ರಗಳ ಹತ್ತಿರವೆ ತಂಗಲು ಸರ್ಕಾರದ ಮುಂದಿನ ಕ್ರಮಗಳೇನು? | |

**ಆಕುಕ 43 ಎಸ್‌ಎಂಎಂ 2025**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**

"ಅನುಬಂಧ-1 ②

ಕಛೇರಿ : +91 80 2335 4039
+91 80 2335 4085
ಇ-ಮೇಲ್ : com-hfws@karnataka.gov.in

# ಆಯುಕ್ತಾಲಯ
## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು

**ಸಂಖ್ಯೆ: JRO(1A)/18/2023-24** **ದಿ: -09-2023**

**ಸುತ್ತೋಲೆ**

**ವಿಷಯ:** ವೈದ್ಯರು ಹಾಗೂ ಸಿಬ್ಬಂದಿಗಳು ಕೇಂದ್ರ ಸ್ಥಾನದಲ್ಲಿ ಕಡ್ಡಾಯವಾಗಿ ವಾಸ್ತವ್ಯವಿರುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಸುತ್ತೋಲೆ ಸಂ:ಆಕುಕ/68/ಹೆಚ್‌ಎಸ್‌ಹೆಚ್/2008, ದಿನಾಂಕ: 01-02-2008.

******

ರಾಜ್ಯ ಸರ್ಕಾರವು ತನ್ನ ಆರೋಗ್ಯ ನೀತಿ ಪ್ರಕಾರ ವಿವಿಧ ಹಂತಗಳಲ್ಲಿ ಅಂದರೆ ಉಪ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು/ಜಿಲ್ಲಾ ಆಸ್ಪತ್ರೆಗಳ ಮೂಲಕ ಸಾರ್ವಜನಿಕರಿಗೆ ಆರೋಗ್ಯ ಸೇವೆಗಳನ್ನು ಒದಗಿಸಲಾಗುತ್ತಿದೆ. ಈ ದಿಶೆಯಲ್ಲಿ ಆರೋಗ್ಯ ಸೇವೆಗಳ ಕನಿಷ್ಠ ಆವಶ್ಯಕ ಕಾರ್ಯಕ್ರಮಗಳಾದ ರೋಗನಿರೋಧಕ ಸೇವೆಗಳು, ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮ, ಸಾಂಕ್ರಾಮಿಕ/ಅಸಾಂಕ್ರಾಮಿಕ ರೋಗಗಳ ನಿವಾರಣೆ ಮತ್ತು ನಿರ್ಮೂಲನ ಕಾರ್ಯಕ್ರಮಗಳು, ಪರಿಸರ ಸ್ವಚ್ಛತೆ, ಪೌಷ್ಠಿಕ ಆಹಾರ ಸೇವನೆ, ಆರೋಗ್ಯ ಶಿಕ್ಷಣ ಮತ್ತು ಶಾಲಾ ಆರೋಗ್ಯ ಸೇವೆಗಳು, ಪ್ರಯೋಗಾಲಯ ಸೇವೆಗಳು ಹಾಗೂ ಇನ್ನೂ ಅನೇಕ ರಾಷ್ಟ್ರೀಯ ಕಾರ್ಯಕ್ರಮಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಒದಗಿಸಲಾಗುತ್ತಿದೆ.

ಮೇಲ್ಕಂಡ ಇಲಾಖೆಯ ಎಲ್ಲಾ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಹಾಗೂ ತುರ್ತು ಸೇವೆಗಳನ್ನು ಸಕಾಲದಲ್ಲಿ ಒದಗಿಸುವ ಸಲುವಾಗಿ ವೈದ್ಯರು ಹಾಗೂ ಸಿಬ್ಬಂದಿಗಳಿಗೆ ವಸತಿ ಗೃಹಗಳನ್ನು ಕಲ್ಪಿಸಲಾಗಿರುತ್ತದೆ. ವಸತಿ ಗೃಹ ಲಭ್ಯವಿಲ್ಲದ ಕಡೆ ಕೇಂದ್ರ ಸ್ಥಾನದಲ್ಲಿ ವಾಸಿಸಲು HRA ಸೌಲಭ್ಯವನ್ನು ನೀಡಲಾಗುತ್ತಿರುತ್ತದೆ. ವೈದ್ಯರೂ ಹಾಗೂ ಸಿಬ್ಬಂದಿಗಳು ಸರ್ಕಾರ ಒದಗಿಸಿದ ನಿಯೋಜಿತ ವಸತಿ ಗೃಹಗಳಲ್ಲಿ ವಾಸ್ತವ್ಯವಿರದೇ ಕಟ್ಟಡಗಳು ಶಿಥಿಲಗೊಂಡು ದುರಸ್ತಿ ಮಾಡದಷ್ಟು ಹಾಳಾಗುತ್ತಿದ್ದು, ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗುತ್ತಿರುತ್ತದೆ. ವಿದ್ಯುಚ್ಛಕ್ತಿ ಬಿಲ್‌ಗಳನ್ನು ನಿಯಮಿತವಾಗಿ ಭರಿಸದೇ ಹೆಚ್ಚಿನ ಬಾಕಿ ಉಳಿಸಿಕೊಂಡಿರುವುದು ಸಹ ಗಮನಕ್ಕೆ ಬಂದಿರುತ್ತದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ತುರ್ತು ಸೇವೆ ವ್ಯಾಪ್ತಿಗೆ ಒಳಪಡುತ್ತಿದ್ದು, ವೈದ್ಯರು ಹಾಗೂ ಸಿಬ್ಬಂದಿಗಳು ಕೇಂದ್ರಸ್ಥಾನದಲ್ಲಿ ವಾಸವಿರದೇ ಇರುವುದರಿಂದ ಸಾರ್ವಜನಿಕರು ಸಕಾಲದಲ್ಲಿ ವೈದ್ಯಕೀಯ ತುರ್ತು ಸೇವೆ ಪಡೆಯಲು ವಂಚಿತರಾಗುತ್ತಿದ್ದು, ಈ ಬಗ್ಗೆ ಕ್ರಮಕೈಗೊಳ್ಳುವಂತೆ ಸಾರ್ವಜನಿಕರು, ಜನಪ್ರತಿನಿಧಿಗಳು ಹಾಗೂ ಮಾಧ್ಯಮಗಳಿಂದ ಪದೇ ಪದೇ ಅನೇಕ ಮನವಿ/ದೂರುಗಳು ಸ್ವೀಕೃತವಾಗುತ್ತಿದೆ. ಹಾಗೂ ಇದರೊಂದಿಗೆ ವಸತಿ ಗೃಹ ಒದಗಿಸಿರುವ ಉದ್ದೇಶ ವಿಫಲವಾಗುತ್ತಿದೆ. ಕೇಂದ್ರಸ್ಥಾನದಲ್ಲಿ ಲಭ್ಯವಿಲ್ಲದಿರುವುದರಿಂದ ಸಾರ್ವಜನಿಕರಿಗೆ ಚಿಕಿತ್ಸೆಯನ್ನು ಸಕಾಲದಲ್ಲಿ ನೀಡದೇ ಹಲವಾರು ಸಾವು, ನೋವುಗಳು ಸಂಭವಿಸುತ್ತಿದ್ದು, ಸಾರ್ವಜನಿಕರಲ್ಲಿ ಇಲಾಖೆಯ ಬಗ್ಗೆ ಋಣಾತ್ಮಕ ಭಾವನೆ ಉಂಟಾಗುತ್ತಿದೆ.

ಉಲ್ಲೇಖಿತ ಸುತ್ತೋಲೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿಗೆ ನಿಯಮ, 1966ರ ನಿಯಮ 19ರ ಪ್ರಕಾರ ಪ್ರತಿ ಸರ್ಕಾರಿ ನೌಕರರು ತನ್ನ ಕರ್ತವ್ಯ ನಿರ್ವಹಣೆಗಾಗಿ ಸರ್ಕಾರ ನೀಡಿರುವ ಸವಲತ್ತುಗಳನ್ನು ಸೂಕ್ತವಾಗಿ ಉಪಯೋಗಿಸಿಕೊಳ್ಳುವುದು ಆದ್ಯ ಕರ್ತವ್ಯವಾಗಿರುತ್ತದೆ ಹಾಗೂ ಅದೇ ನಿಯಮಾವಳಿಗಳ ನಿಯಮ 3 (iii) ರ ಪ್ರಕಾರ ಸರ್ಕಾರಿ ನೌಕರನು ಯಾವಾಗಲೂ ಸರ್ಕಾರಿ ನೌಕರನಿಗೆ ತಕ್ಕದಲ್ಲದಂತಹ ಯಾವುದೇ ಕಾರ್ಯವನ್ನು ಮಾಡುವಂತಿಲ್ಲ. ಇಲ್ಲವಾದಲ್ಲಿ ಅದು ದುರ್ನಡತೆಯಾಗುತ್ತದೆ ಹಾಗೂ ತತ್ಪರಿಣಾಮವಾಗಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳ ಪ್ರಕಾರ ಶಿಸ್ತು ಕ್ರಮಕ್ಕೆ ಒಳಗಾಗುತ್ತಾರೆ ಎಂದು ತಿಳಿವಳಿಕೆಪಡಿಸಲಾಗಿರುತ್ತದೆ.

RLp

ಆದ್ದರಿಂದ ಮೇಲ್ಕಂಡ ನಿಯಮಗಳನ್ನು ಸಂಬಂಧಪಟ್ಟ ವೈದ್ಯರು/ಸಿಬ್ಬಂದಿಗಳ ಗಮನಕ್ಕೆ ತರುತ್ತಾ, ಸರ್ಕಾರವು ಕಲ್ಪಿಸಿರುವ ಸರ್ಕಾರಿ ಸೌಕರ್ಯವನ್ನು ಸೂಕ್ತವಾಗಿ ಉಪಯೋಗಿಸಿಕೊಂಡು ಕಡ್ಡಾಯವಾಗಿ ವಸತಿ ಗೃಹ/ಕೇಂದ್ರಸ್ಥಾನದಲ್ಲಿ ವಾಸ್ತವ್ಯ ಹೂಡುವುದು ಹಾಗೂ ಸಾರ್ವಜನಿಕರ ತುರ್ತು ಸೇವೆಯಲ್ಲಿ ಯಾವುದೇ ಲೋಪವಾಗದಂತೆ ಕರ್ತವ್ಯವನ್ನು ಜವಾಬ್ದಾರಿಯುತವಾಗಿ ನಿರ್ವಹಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ. ತಪ್ಪಿದಲ್ಲಿ ಸಂಬಂಧಪಟ್ಟ ವೈದ್ಯರು/ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮಜರುಗಿಸಲಾಗುವುದು.

RL 22.9.23

**ಆಯುಕ್ತರು,**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು.**

ಇವರಿಗೆ,

1. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು____________ಜಿಲ್ಲೆ.
2. ಎಲ್ಲಾ ಜಿಲ್ಲಾ ಶಸ್ತ್ರಚಿಕಿತ್ಸಕರು, ಜಿಲ್ಲಾ ಆಸ್ಪತ್ರೆ_______ಜಿಲ್ಲೆ.
3. ವೈದ್ಯಕೀಯ ಅಧೀಕ್ಷಕರು, ಕೆ.ಸಿ. ಜನರಲ್ ಆಸ್ಪತ್ರೆ, ಮಲ್ಲೇಶ್ವರಂ/ಜಯನಗರ ಸಾರ್ವಜನಿಕ ಆಸ್ಪತ್ರೆ/ಹೆಚ್.ಎಸ್.ಐ.ಎಸ್ ಘೋಷ ಆಸ್ಪತ್ರೆ/ಸರ್.ಸಿ.ವಿ ರಾಮನ್ ಸಾರ್ವಜನಿಕ ಆಸ್ಪತ್ರೆ, ಇಂದಿರಾನಗರ ಬೆಂಗಳೂರು.

ಪ್ರತಿಯನ್ನು ಮಾಹಿತಿಗಾಗಿ,

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆಕುಕ ಇಲಾಖೆ, ವಿಕಾಸಸೌಧ, ಬೆಂಗಳೂರು. ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಎಲ್ಲಾ ಜಿಲ್ಲಾ ಜಿಲ್ಲಾಧಿಕಾರಿಗಳು.
3. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು...............
4. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
5. ಕಛೇರಿ ಪ್ರತಿ.

RL